**Akashvani : Bangalore**
**28.06.2024 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**28.06.2024 / 18.40 hrs**

**<><*<><>*><>**

<u>ಮುಖ್ಯಾಂಶಗಳು</u>

- **ವಾಲ್ಮೀಕಿ ನಿಗಮ ಹಗರಣ ಪ್ರಕರಣ: ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆಗೆ ಬಿಜೆಪಿ ಆಗ್ರಹ**
- **ರಾಜ್ಯದಲ್ಲಿ ಡೆಂಘಿ ಪ್ರಕರಣಗಳ ತಡೆಗೆ ಅಗತ್ಯ ಕ್ರಮ; ಆರೋಗ್ಯ ಸಚಿವ ದಿನೇಶ ಗುಂಡೂರಾವ್**
- **ರಾಜ್ಯದ ಕರಾವಳಿ, ಒಳನಾಡಿನಲ್ಲಿಂದು ಧಾರಾಕಾರ ಮಳೆ**
- **ಮಹಿಳಾ ಟೆಸ್ಟ್ ಕ್ರಿಕೆಟ್; ಮೊದಲ ದಿನದ ಅಂತ್ಯಕ್ಕೆ ದಕ್ಷಿಣ ಆಫ್ರಿಕಾ ವಿರುದ್ಧ ೫೨೫ ರನ್ ಗಳಿಸಿದ ಭಾರತ**

**<><*<><>*><>**

ವಾಲ್ಮೀಕಿ ಅಭಿವೃದ್ಧಿ ನಿಗಮದ ೧೮೭ ಕೋಟಿ ರೂ. ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭಾಗಿಯಾಗಿದ್ದು, ಅವರು ಕೂಡಲೇ ರಾಜೀನಾಮೆ ನೀಡಬೇಕು ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಕೋಲಾರದಲ್ಲಿಂದು ಆಗ್ರಹಿಸಿದರು. ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣದ ವಿರುದ್ಧ ಬಿಜೆಪಿಯಿಂದ ನಡೆದ ಪ್ರತಿಭಟನೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣದಲ್ಲಿ ಸಚಿವ ಬಿ.ನಾಗೇಂದ್ರ ಅವರದ್ದು ಶೇ.೨೦ ರಷ್ಟು ಪಾಳಿದ್ದರೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರದ್ದು ಶೇ.೮೦ ರಷ್ಟು ಪಾಲಿದೆ. ಆದ್ದರಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ನೀಡಬೇಕು. ಈ ಕುರಿತು ಸದನದಲ್ಲೂ ಆಗ್ರಹಿಸುತ್ತೇವೆ. ಸಿಎಂ ರಾಜೀನಾಮೆ ನೀಡುವವರೆಗೂ ಹೋರಾಡುತ್ತೇವೆ ಎಂದರು. ಕಾಂಗ್ರೆಸ್ ಸರ್ಕಾರ ಉಚಿತಗಳ ಹೆಸರಲ್ಲಿ ಬೆಲೆ ಏರಿಕೆ ಮಾಡಿದೆ. ಹಾಲಿನ ಬೆಲೆ ಏರಿಕೆ ಮಾಡಿದ್ದನ್ನು ಪ್ರಶ್ನಿಸಿದರೆ, ಹೆಚ್ಚು ಹಾಲು ನೀಡಿರುವುದಾಗಿ ಹೇಳುತ್ತಿದ್ದು, ಹೆಚ್ಚಿನ ಹಣ ರೈತರಿಗೆ ತಲುಪುತ್ತಿಲ್ಲ ಎಂದು ದೂರಿದರು. ರೈತರಿಗೆ ೮೦೦ ಕೋಟಿ ರೂ. ಹಾಲಿನ ಪ್ರೋತ್ಸಾಹಧನ ನೀಡಬೇಕಿದೆ. ರೈತರು ಬರ ಪರಿಹಾರ, ಪ್ರೋತ್ಸಾಹಧನ ಇಲ್ಲದೆ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಕಲುಷಿತ ನೀರು ಕುಡಿದು ಜನರು ಮೃತಪಟ್ಟಿದ್ದಾರೆ. ಡೆಂಘೀ ರೋಗ ಹರಡುತ್ತಿದ್ದು, ಅದಕ್ಕೆ ಚಿಕಿತ್ಸೆ ನೀಡಲು ಸರ್ಕಾರದ ಬಳಿ ಹಣವಿಲ್ಲ ಎಂದು ಆರ್.ಅಶೋಕ್ ಟೀಕಿಸಿದರು. ಇದೇ ವೇಳೆ, ವಾಲ್ಮೀಕಿ ನಿಗಮದ ಹಗರಣ ಖಂಡಿಸಿ, ಕೊಪ್ಪಳದ ನಗರದಲ್ಲಿ ಬಿಜೆಪಿ ಕಾರ್ಯಕರ್ತರು ಬೃಹತ್ ಪ್ರತಿಭಟನೆ ನಡೆಸಿ, ಜಿಲ್ಲಾಧಿಕಾರಿ ಕಚೇರಿಗೆ ಮುತ್ತಿಗೆ ಹಾಕಲು ಯತ್ನಿಸಿದರು. ಈ ವೇಳೆ ಬಿಜೆಪಿ ಕಾರ್ಯಕರ್ತರನ್ನು ಪೊಲೀಸರು ಬಂಧಿಸಿ, ನಂತರ ಬಿಡುಗಡೆಗೊಳಿಸಿದರು. ಮತ್ತೊಂದೆಡೆ, ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಬೇಕೆಂದು ಆಗ್ರಹಿಸಿ, ಬಿಜೆಪಿ ಕಾರ್ಯಕರ್ತರು ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿಗಳ ಕಚೇರಿ ಮುಂಭಾಗದಲ್ಲಿ ಪ್ರತಿಭಟನೆ ನಡೆಸಿದರು.

**<><*<><>*><>**

ರಾಜ್ಯದಲ್ಲಿ ಡೆಂಘಿ ಪ್ರಕರಣಗಳ ಸಂಖ್ಯೆ ಹೆಚ್ಚುತ್ತಿದ್ದು, ರೋಗ ತಡೆಗೆ ಸೂಕ್ತ ಕ್ರಮವಹಿಸಬೇಕೆಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಹೇಳಿದರು. ಬಾಗಲಕೋಟೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಕಾರ್ಯಾಲಯ ಸಹಯೋಗದಲ್ಲಿ ಇಂದು ಹಮ್ಮಿಕೊಂಡ ಡೆಂಘಿ ಹಾಗೂ ಚಿಕುನ್ ಗುನ್ಯಾ ನಿಯಂತ್ರಣ ಪೋಸ್ಟರ ಬಿಡುಗಡೆ ಹಾಗೂ ಈಡೀಸ್ ಲಾರ್ವಾ ನಿರ್ಮೂಲನಾ ದಿನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಈಗಾಗಲೇ ಡೆಂಘಿ ನಿಯಂತ್ರಣಕ್ಕೆ ಇಲಾಖೆಯಿಂದ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಪ್ರತಿ ಶುಕ್ರವಾರ ಆಶಾ ಕಾರ್ಯಕರ್ತರು ಸೇರಿದಂತೆ ಇಲಾಖೆಯ ಎಲ್ಲ ಅಧಿಕಾರಿಗಳು, ಸಿಬ್ಬಂದಿ ಮನೆ

ಮನೆಗೆ ಭೇಟಿ ನೀಡಿ ಜಾಗೃತಿ ಮೂಡಿಸುತ್ತಾರೆ. ಶುದ್ಧ ನೀರಿನಲ್ಲಿ ಉತ್ಪತ್ತಿಯಾಗುವ ಲಾರ್ವಾ ನಾಶ ಪಡಿಸುವ ಬಗ್ಗೆ ಮಾಹಿತಿ ನೀಡುವ ಕೆಲಸವಾಗಬೇಕು ಎಂದು ದಿನೇಶ ಗುಂಡೂರಾವ್ ಸೂಚಿಸಿದರು.

**<><*<><>*><>**

ಶಿವಮೊಗ್ಗ ಜಿಲ್ಲೆಯ ಜನರ ಸಮಸ್ಯೆಗಳಿಗೆ ತಕ್ಷಣದ ಪರಿಹಾರ ಕ್ರಮ ಕೈಗೊಳ್ಳುವ ನಿಟ್ಟಿನಲ್ಲಿ ಸರ್ಕಾರ ಉತ್ಸುಕವಾಗಿದೆ ಎಂದು ರಾಜ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಮಧು ಎಸ್. ಬಂಗಾರಪ್ಪ ಹೇಳಿದರು. ಇಂದು ನಗರದ ಕುವೆಂಪು ರಂಗಮಂದಿರದಲ್ಲಿ ಜಿಲ್ಲಾಡಳಿತದಿಂದ ಆಯೋಜಿಸಲಾಗಿದ್ದ ಜನ ಸ್ಪಂದನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ  ಅವರು ಮಾತನಾಡಿದರು.  ಇದೇ ವೇಳೆ, ನಗರದ ಮೌಲಾನಾ ಆಜಾದ್ ಮಾದರಿ ಶಾಲೆಯಲ್ಲಿ ಸುಮಾರು ೧೫೦ಕ್ಕೂ ಹೆಚ್ಚಿನ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದು, ಕಳೆದ ಒಂದು ವರ್ಷದಿಂದ ಮಧ್ಯಾಹ್ನದ ಬಿಸಿ ಊಟ ಸೇರಿದಂತೆ ಯಾವುದೇ ಸೌಲಭ್ಯಗಳನ್ನು ನೀಡುತ್ತಿಲ್ಲ. ಈ ಸೌಲಭ್ಯಗಳನ್ನು ಒದಗಿಸುವಂತೆ  ವಿದ್ಯಾರ್ಥಿಗಳು ಸಚಿವರಲ್ಲಿ ಮನವಿ ಮಾಡಿದರು.  ವಿದ್ಯಾರ್ಥಿಗಳ ಮನವಿಗೆ ಸ್ಪಂದಿಸಿದ ಸಚಿವರು, ಮುಂದಿನ ಎರಡು ದಿನಗಳೊಳಗಾಗಿ ರಾಗಿ ಗಂಜಿ, ಹಾಲು, ಮೊಟ್ಟೆ, ಊಟ ಸೇರಿದಂತೆ ಎಲ್ಲಾ ಸೌಲಭ್ಯಗಳನ್ನು ಒದಗಿಸುವಂತೆ ಜಿಲ್ಲಾ ಪಂಚಾಯಿತಿಯ ಮುಖ್ಯ ಅಧಿಕಾರಿಗೆ ಸೂಚಿಸಿದರು. ಈ ಜನಸ್ಪಂದನ ಕಾರ್ಯಕ್ರಮದಲ್ಲಿ ಜಿಲ್ಲೆಯ ವಿವಿಧ ತಾಲೂಕುಗಳ ೨೭೫ ಹೆಚ್ಚಿನ ಜನರು ತಮ್ಮ ಅಹವಾಲುಗಳನ್ನು ಸಲ್ಲಿಸಿದರು.

**<><*<><>*><>**

ಬೆಂಗಳೂರಿನ ಆಕಾಶವಾಣಿ ಸುದ್ದಿ ವಿಭಾಗದಿಂದ ಪರೀಕ್ಷೆ ನಿರ್ವಹಣೆ ಮತ್ತು ಸರ್ಕಾರದ ಅಗತ್ಯ ಸುಧಾರಣೆಗಳ ಕುರಿತ ಸಂವಾದ ಕಾರ್ಯಕ್ರಮವು ನಾಳೆ ಬೆಳಗ್ಗೆ ೯.೦೫ ಕ್ಕೆ ಪ್ರಸಾರವಾಗಲಿದೆ. ಕಾರ್ಯಕ್ರಮದಲ್ಲಿ ಬೆಂಗಳೂರು ವಿಶ್ವವಿದ್ಯಾನಿಲಯದ ವಿಶ್ರಾಂತ ಉಪಕುಲಪತಿ ಡಾ.ಕೆ.ಆರ್.ವೇಣುಗೋಪಾಲ್ ಸಂಪನ್ಮೂಲ ವ್ಯಕ್ತಿಗಳಾಗಿದ್ದು, ಐಐಎಚ್‌ಆರ್‌ನ ನಿವೃತ್ತ ವಿಜ್ಞಾನಿ ಡಾ.ಬಿ.ನಾರಾಯಣಸ್ವಾಮಿ ಸಂವಾದ ನಡೆಸಿಕೊಡಲಿದ್ದಾರೆ.

**<><*<><>*><>**

ಭಾನುವಾರ ಬೆಳಗ್ಗೆ ೧೧ ಗಂಟೆಗೆ ಆಕಾಶವಾಣಿಯಲ್ಲಿ ಪ್ರಸಾರವಾಗುವ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ದೇಶ ಮತ್ತು ವಿದೇಶದ ಜನರೊಂದಿಗೆ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮಾಸಿಕ ರೇಡಿಯೋ ಕಾರ್ಯಕ್ರಮದ ೧೧೧ ನೇ ಸಂಚಿಕೆಯಾಗಿದೆ. ಮೋದಿ ಅವರು ಸತತ ಮೂರನೇ ಬಾರಿಗೆ ಪ್ರಧಾನಿಯಾಗಿ ಅಧಿಕಾರ ವಹಿಸಿಕೊಂಡ ನಂತರ ಇದು ಮೊದಲ ಸಂಚಿಕೆಯಾಗಿದೆ.

**<><*<><>*><>**

ಇನ್ನು ಹವಾವರ್ತಾಮಾನ...

ಕರ್ನಾಟಕದ ಕರಾವಳಿ ಮತ್ತು ಒಳನಾಡಿನ ಬಹುತೇಕ ಭಾಗಗಳಲ್ಲಿ ಇಂದು ಮಳೆಯಾಗಿದೆ.  ಉತ್ತರಕನ್ನಡ ಜಿಲ್ಲೆಯ ಕದ್ರಾ ಮತ್ತು ಶಿವಮೊಗ್ಗ ಜಿಲ್ಲೆಯ ಆಗುಂಬೆಯಲ್ಲಿ ತಲಾ ೮ ಸೆಂಟಿ ಮೀಟರ್ ಹಾಗೂ ಉಡುಪಿ ಜಿಲ್ಲೆಯ ಕೋಟಾದಲ್ಲಿ ೭ ಸೆಂಟಿಮೀಟರ್ ಮಳೆಯಾಗಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ. ಕೊಟ್ಟಿಗೆಹಾರದಲ್ಲಿ ೬ ಸೆಂಟಿ ಮೀಟರ್, ಮಂಗಳೂರು ೫, ಉಪ್ಪಿನಂಗಡಿ, ಪುತ್ತೂರು, ಸಿದ್ದಾಪುರ, ಕುಮಟಾ, ಮುಲ್ಕಿ ಮತ್ತು ಕಮ್ಮರಡಿ ತಲಾ ೪ ಸೆಂಟಿ ಮೀಟರ್, ಶಿರಾಲಿ, ಕುಂದಾಪುರ, ಧರ್ಮಸ್ಥಳ, ಮಾಣಿ, ಕಾರವಾರ, ಮಂಕಿ, ಜೊಯಿಡಾ, ಪಣಂಬೂರು, ಕುಂಚದಕಟ್ಟೆ, ಬಾಗಮಂಡಲ, ವಿರಾಜಪೇಟೆ ಮತ್ತು ಪೊನ್ನಂಪೇಟೆಯಲ್ಲಿ ೩ ಸೆಂಟಿಮೀಟರ್ ಮಳೆಯಾಗಿದೆ. ರಾಜ್ಯದ ಕರಾವಳಿಯಲ್ಲಿ ತೀವ್ರ ಬಿರುಗಾಳಿ ಹಿನ್ನೆಲೆಯಲ್ಲಿ ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ. ಮುಂದಿನ ೨೪ ಗಂಟೆಗಳಲ್ಲಿ ರಾಜ್ಯದ ಉತ್ತರ ಒಳನಾಡು ಮತ್ತು ದಕ್ಷಿಣ ಒಳನಾಡಿನ ಹಲವು ಪ್ರದೇಶಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗಲಿದೆ.

ಸಾಮಾನ್ಯವಾಗಿ ಮೋಡಕವಿದ ವಾತಾವರಣವಿರಲಿದ್ದು, ಗರಿಷ್ಠ ತಾಪಮಾನ ೩೦, ಕನಿಷ್ಠ ತಾಪಮಾನ ೨೧ ಡಿಗ್ರಿ ಸೆಲ್ಸಿಯಸ್ ಸಂಭವ.

<><*<><>*><>

ಕಂದಾಯ ಇಲಾಖೆಯು ಆರ್‌ಟಿಸಿ ಯನ್ನು ಆಧಾರ್‌ನೊಂದಿಗೆ ಜೋಡಿಸುವ ಕಾರ್ಯವನ್ನು ಪ್ರಾರಂಭ ಮಾಡಿದೆ. ಕೋಲಾರ ಜಿಲ್ಲೆಯಾದ್ಯಂತ ಸುಮಾರು ಶೇಕಡ ೭೦ ರಷ್ಟು ಆರ್‌ಟಿಸಿ ಗಳನ್ನು ಆಧಾರ್‌ಗೆ ಜೋಡಣೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಅಕ್ರಂಪಾಷ ತಿಳಿಸಿದ್ದಾರೆ.

<><*<><>*><>

ಕಾವೇರಿ ನದಿಯ ಉಗಮ ಸ್ಥಾನ ಮಡಿಕೇರಿ ಜಿಲ್ಲೆಯಲ್ಲಿ ವ್ಯಾಪಕ ಮಳೆಯಾಗುತ್ತಿರುವ ಪರಿಣಾಮ ಮಂಡ್ಯ ಜಿಲ್ಲೆಯ ಕೃಷ್ಣರಾಜ ಸಾಗರ ಅಣೆಕಟ್ಟೆಯ ಒಳ ಹರಿವಿನಲ್ಲಿ ಭಾರೀ ಹೆಚ್ಚಳವಾಗಿದೆ.

<><*<><>*><>

ತುಮಕೂರು ಜಿಲ್ಲೆಯ ಎಲ್ಲ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿರುವ ಕುಡಿಯುವ ನೀರಿನ ಮೂಲಗಳನ್ನು ಕಡ್ಡಾಯವಾಗಿ ಪರೀಕ್ಷೆ ಮಾಡಿ ವರದಿ ನೀಡಬೇಕು ಎಂದು ಜಿಲ್ಲಾ ಪಂಚಾಯತಿ ಮಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿ. ಪ್ರಭು ಸೂಚನೆ ನೀಡಿದರು. ನೀರು ಪರೀಕ್ಷೆ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಈವರೆಗೂ ಕುಡಿಯುವ ನೀರಿಗೆ ಸಂಬಂಧಿಸಿದಂತೆ ೧೯೮೭ ಓವರ್ ಹೆಡ್ ಟ್ಯಾಂಕ್, ೨೯ ಕೆರೆಗಳನ್ನು ಸ್ವಚ್ಛಗೊಳಿಸಲಾಗಿದೆಯಲ್ಲದೆ ಸುಸ್ಥಿತಿಯಲ್ಲಿರುವ ೧೪೦೦ ಶುದ್ಧ ನೀರಿನ ಘಟಕಗಳನ್ನು ನಿರ್ವಹಣೆ ಮಾಡಲಾಗುತ್ತಿದೆ ಎಂದರು. ಕಲುಷಿತವಾಗುವ ಮುನ್ನವೇ ನೀರಿನ ಗುಣಮಟ್ಟವನ್ನು ಪತ್ತೆ ಹಚ್ಚಿದಲ್ಲಿ ಆಗಬಹುದಾದ ಜೀವಹಾನಿ, ಆರೋಗ್ಯ ಸಮಸ್ಯೆಗಳನ್ನು ತಡೆಗಟ್ಟಬಹುದು. ಗ್ರಾಮ ಮಟ್ಟದಲ್ಲಿ ಕಲುಷಿತ ನೀರಿನಿಂದ ಯಾವುದೇ ಸಮಸ್ಯೆ ಉಂಟಾದಲ್ಲಿ ಸ್ಥಳೀಯ ಅಧಿಕಾರಿಗಳೇ ನೇರ ಹೊಣೆಗಾರರಾಗುತ್ತಾರೆ ಎಂದು ಎಚ್ಚರಿಸಿದರು.

<><*<><>*><>

ಲಿಂಗತ್ವ ಅಲ್ಪಸಂಖ್ಯಾತರಿಗಾಗಿ ಇರುವಂತಹ ಸರ್ಕಾರದ ವಿವಿಧ ಇಲಾಖೆಯ ಯೋಜನೆಗಳ ಲಾಭವನ್ನು ಸಕಾಲಕ್ಕೆ ದೊರಕಿಸುವಂತೆ ಯಾದಗಿರಿ ಜಿಲ್ಲಾಧಿಕಾರಿ ಡಾ. ಬಿ.ಸುಶೀಲಾ ಅವರು ಅಧಿಕಾರಿಗಳಿಗೆ ಸೂಚಿಸಿದರು.

<><*<><>*><>

ನಾಗರಿಕರಿಗೆ ಉತ್ತಮ ಸೌಲಭ್ಯ ಹಾಗೂ ಸರ್ಕಾರಿ ಯೋಜನೆಗಳ ಪ್ರಯೋಜನ ದೊರಕಬೇಕಾದರೆ ಆಡಳಿತದಲ್ಲಿ ಸುಧಾರಣೆ ಅತ್ಯಗತ್ಯವಾಗಿದೆ. ಇತ್ತೀಚೆಗೆ ಆಡಳಿತದಲ್ಲಿ ಸಾಕಷ್ಟು ಸುಧಾರಣೆಯಾಗಿದ್ದರೂ ಪಾರದರ್ಶಕತೆ ಕೊರತೆ ಎದ್ದು ಕಾಣುತ್ತಿದ್ದು, ಇದನ್ನು ನಿವಾರಿಸಬೇಕಿದೆ ಎಂದು ಕರ್ನಾಟಕ ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷ ಆರ್.ವಿ.ದೇಶಪಾಂಡೆ ಅಭಿಪ್ರಾಯಪಟ್ಟರು.

<><*<><>*><>

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳ ಸಂಯುಕ್ತಾಶ್ರಯದಲ್ಲಿ ಈಡಿಸ್ ಇಜಿಪ್ಟೆ ಸೊಳ್ಳೆ ಉತ್ಪತ್ತಿ ತಾಣಗಳನ್ನು ನಾಶ ಪಡಿಸುವ ಅಭಿಯಾನಕ್ಕೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿಗಳಾದ ಸದಾಶಿವ ಪ್ರಭು.ಬಿ ಅವರು ಹಸಿರು ನಿಶಾನೆ ತೋರಿದರು.

<><*<><>*><>

ಸಂಕ್ಷಿಪ್ತ

೧.	ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆಯಲ್ಲಿ ತಾಲ್ಲೂಕು ಆಡಳಿತ ವತಿಯಿಂದ ಇಂದು ಜನಸ್ಪಂದನಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಹೊಸಕೋಟೆ ಶಾಸಕ ಹಾಗೂ ಕರ್ನಾಟಕ ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಶರತ್ ಕುಮಾರ್ ಬಚ್ಚೇಗೌಡ ಕಾರ್ಯಕ್ರಮದಲ್ಲಿ ಮಾತನಾಡಿ, ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸಿ, ಸರ್ಕಾರದ ಸೌಲಭ್ಯಗಳನ್ನು ಜನರ ಮನೆ ಬಾಗಿಲಿಗೆ ತಲುಪಿಸುವುದು ಸರ್ಕಾರದ ಉದ್ದೇಶವಾಗಿದೆ ಎಂದು ಹೇಳಿದರು.

೨.	ಚಿತ್ರದುರ್ಗ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಮಿಷನ್ ಶಕ್ತಿ ಯೋಜನೆಯಡಿ ಜಿಲ್ಲೆಯ ಎಲ್ಲಾ ವೈದ್ಯಾಧಿಕಾರಿಗಳಿಗೆ ಪಿಸಿ-ಪಿಎನ್‌ಡಿಟಿ ಕುರಿತು ತರಬೇತಿ ಹಾಗೂ ಜಾಗೃತಿ ಅಭಿಯಾನ ನಡೆಯಿತು.

**<><*<><>*><>**

ಚೆನ್ನೈನ ಎಂ.ಎ.ಚಿದಂಬರಂ ಸ್ಟೇಡಿಯಂನಲ್ಲಿ ಇಂದಿನಿಂದ ಆರಂಭವಾಗಿರುವ ಭಾರತ ಮತ್ತು ದಕ್ಷಿಣ ಆಫ್ರಿಕಾ ನಡುವಿನ ಮಹಿಳಾ ಕ್ರಿಕೆಟ್‌ನ ಏಕೈಕ ಟೆಸ್ಟ್ ಪಂದ್ಯದಲ್ಲಿ ಆತಿಥೇಯ ಭಾರತ ತಂಡ ಉತ್ತಮ ಆರಂಭ ಕಂಡಿದೆ. ಟಾಸ್ ಗೆದ್ದು ಬ್ಯಾಟಿಂಗ್ ಆಯ್ಕೆ ಮಾಡಿಕೊಂಡ ಭಾರತ ತಂಡದ ಮೊದಲ ದಿನದ ಅಂತ್ಯಕ್ಕೆ ೪ ವಿಕೆಟ್ ನಷ್ಟಕ್ಕೆ ೫೨೫ ರನ್ ಗಳಿಸಿ, ಎರಡನೇ ದಿನಕ್ಕೆ ಬ್ಯಾಂಟಿಂಗ್ ಕಾಯ್ದುಕೊಂಡಿದೆ. ಭಾರತೀಯ ವನಿತೆಯರು ಮೊದಲ ಅವಧಿಯಲ್ಲಿಯೇ ೧೦೦ರ ಗಡಿ ದಾಟಿ ೧೩೦ ರನ್ ಗಳಿಸಿದ್ದರು. ಆರಂಭಿಕರಾದ ಶಫಾಲಿ ವರ್ಮಾ ೨೦೫ ರನ್‌ಗಳ ದ್ವಿಶತಕ ಮತ್ತು ಸ್ಮೃತಿ ಮಂಧಾನ ೧೪೯ ರನ್ ನೊಂದಿಗೆ ಶತಕ ಸಿಡಿಸಿದರು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ<>*><>**